## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1252

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಡಾ|| ಎಂ.ಜಿ.ಮುಳೆ (ವಿಧಾನ ಸಭಾ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 17.12.2025

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳು ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತಾಲೂಕು ಮಟ್ಟದಲ್ಲಿ ತಾಲೂಕು ಆಹಾರ ನಿರೀಕ್ಷಕರು ತಹಶೀಲ್ದಾರರ ಅಧೀನದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಆಹಾರ ಇಲಾಖೆಯ ಉಪನಿರ್ದೇಶಕರು ಜಿಲ್ಲಾಧಿಕಾರಿಗಳು ಅಧೀನದಲ್ಲಿ ಕಾರ್ಯ ನಿರ್ವಸುತ್ತಿರುವುದು ನಿಜವೇ; | ಹೌದು |
| ಆ) | ಹಾಗಿದ್ದಲ್ಲಿ ದಿನಾಂಕ 30-01-2021 ರಂದು ಆಹಾರ ಇಲಾಖೆಯ ಆಯುಕ್ತರು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಹೊರಡಿಸಿರುವ ಪರಿಷ್ಕೃತ ಪತ್ರ ಸಂಖ್ಯೆ:CFS/AMC/01/36/2019-20 ಹಚ್ಚಿ ರದ್ದುಪಡಿಸುವ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ ಉಪ ವಿಭಾಗಾಧಿಕಾರಿಗಳಿಗೆ ಮತ್ತು ತಹಶೀಲ್ದಾರರುಗಳಿಗೆ ನೀಡಲಾಗಿದೆಯೇ; | ಇಲ್ಲ |
| ಇ) | ಮೇಲ್ಕಂಡ ಆದೇಶದನ್ವಯ ಮೈಸೂರು ಜಿಲ್ಲೆ ಎಚ್.ಡಿ ಕೋಟೆ ತಾಲ್ಲೂಕಿನಲ್ಲಿ ಸುಳ್ಳು ದಾಖಲೆಗಳು ಹಾಗೂ ರದ್ದಾಗಿರುವ ನಕಲಿ ವಂಶವೃಕ್ಷವನ್ನು (ವಂಶವೃಕ್ಷ ದೃಢೀಕರಣ ಸಂಖ್ಯೆ: RD0038495342146) ಸಲ್ಲಿಸಿ ಅಕ್ರಮವಾಗಿ ಪಡೆದುಕೊಂಡಿರುವ ಬಿಪಿಎಲ್ ಪಡಿತರ ಚೀಟಿಗಳನ್ನು (ಪಡಿತರ ಚೀಟಿ ಸಂಖ್ಯೆ: | ಹೌದು |

| | | |
|---|---|---|
| | 220100209738) ರದ್ದುಪಡಿಸುವಂತೆ ಹೆಚ್.ಡಿ ಕೋಟೆ ತಹಶೀಲ್ದಾರರು, ಉಪ ವಿಭಾಗಾಧಿಕಾರಿಗಳು, ಹುಣಸೂರು ಜಿಲ್ಲಾಧಿಕಾರಿಗಳು, ಮೈಸೂರು ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಇವರಿಗೆ ಹಲವಾರು ಮನವಿ ಪತ್ರಗಳು ಬಂದಿರೋದು ನಿಜವಲ್ಲವೇ; | |
| ಈ) | ಹಾಗಿದ್ದಲ್ಲಿ ಮೇಲ್ಕಂಡ ವಿಷಯದ ಬಗ್ಗೆ ತಹಶೀಲ್ದಾರರು, ಉಪ ಆಯುಕ್ತರು ಅನೇಕ ಸೂಚನೆಗಳು ಮತ್ತು ಆದೇಶಗಳನ್ನು ನೀಡಿದ್ದರು ಸಹ ಅನರ್ಹ BPL ಪಡಿತರ ಚೀಟಿಗಳನ್ನು ರದ್ದುಪಡಿಸುವುದು ಸರಿಯೇ; ಪಡಿತರ ಚೀಟಿಗಳನ್ನು ತಕ್ಷಣ ರದ್ದುಪಡಿಸಲು ಸರ್ಕಾರದ ಮುಂದಿರುವ ಕ್ರಮಗಳೇನು; | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ |
| ಉ) | ಮೇಲ್ಕಂಡ ವಿಷಯದಲ್ಲಿ ಸೂಕ್ತ ದಾಖಲೆಗಳು ಇದ್ದರೂ ಸಹ ಅಕ್ರಮ ಪಡಿತರ ಚೀಟಿಗಳನ್ನು ರದ್ದುಪಡಿಸಲು ಯಾವುದೇ ಕ್ರಮ ಕೈಗೊಳ್ಳದೆ ಸರ್ಕಾರಕ್ಕೆ ಸುಳ್ಳು ವರದಿಗಳನ್ನು ಸಲ್ಲಿಸುವ ಮೂಲಕ ಅಕ್ರಮ ಪಡಿತರ ಚೀಟಿಯನ್ನು ಹೊಂದಿರುವವರು ಜೊತೆಯಲ್ಲಿ ಶಾಮೀಲಾಗಿರುವ ಕಂದಾಯ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಹೆಚ್.ಡಿ ಕೋಟೆ ತಾಲ್ಲೂಕು ಆಹಾರ ನಿರೀಕ್ಷಕರು ಹಾಗೂ ಜಂಟಿ ನಿರ್ದೇಶಕರು, ಮೈಸೂರು ಇವರ ವಿರುದ್ಧ ಯಾವ ಶಿಸ್ತಿನ ಕ್ರಮ ಕೈಗೊಳ್ಳಲಾಗಿದೆ ಮಾಹಿತಿ ನೀಡುವುದು | |

| | | |
|---|---|---|
| | | ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br><br>ಮೇಲಿನ ಮಾನದಂಡಗಳ ಆಧಾರದ ಮೇಲೆ ಅನರ್ಹವೆಂದು ಕಂಡುಬಂದ ಆದ್ಯತಾ ಪಡಿತರ ಚೀಟಿಗಳನ್ನು(PHH) ಆದ್ಯತೇತರ ಪಡಿತರ ಚೀಟಿಗಳನ್ನಾಗಿ(NPHH) ಪರಿವರ್ತಿಸಲು ಕ್ರಮವಹಿಸಲಾಗುತ್ತಿದೆ.<br>ಅದರನ್ವಯ ಆಹಾರ ನಿರೀಕ್ಷಕರ ವರದಿ ಹಾಗೂ ತಹಶೀಲ್ದಾರ್, ಹೆಚ್.ಡಿ ಕೋಟೆ ಇವರ ವರದಿಯನ್ನಾಧರಿಸಿ ಪಡಿತರ ಚೀಟಿ ಸಂಖ್ಯೆ: 220100209738ಯು ಬಿಪಿಎಲ್ ಪಡಿತರ ಚೀಟಿ ಹೊಂದಲು ಅರ್ಹರಿರುವುದರಿಂದ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013ರನ್ವಯ ಆಹಾರ ಭದ್ರತೆಯನ್ನು ಒದಗಿಸಿ, ಪಡಿತರ ಚೀಟಿಯನ್ನು ಮುಂದುವರೆಸಲಾಗಿದ. |

ಇ-ಆನಾಸ 240 ಆಇಸೇ 2025

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳು ಹಾಗೂಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.